Karnatak Law Society's
**Vishwanathrao Deshpande Institute of Technology**
**(Approved by AICTE, New Delhi. Affiliated to VTU, Belagavi)**
**(Recognised Under Section 2(f) by UGC, New Delhi)**
**Udyog Vidya Nagar, Haliyal – 581329, Dist: Uttar Kannada (Karnataka)**
**Phone: 08284-220861, 220334, 221409, Fax: 08284-220813**
**www.klsvdit.edu.in principal@klsvdit.edu.in**

Date: 14-11-2022

**ಪತ್ರಿಕಾ ಪ್ರಕಟಣೆ:**

# ಸಾಫ್ಟ್ವೇರ್ ಕ್ಷೇತ್ರದಲ್ಲಿನ ಉದ್ಯೋಗಾವಕಾಶಗಳ ಕುರಿತು ವೆಬಿನಾರ್

ಕೆ. ಎಲ್. ಎಸ್. ವಿ. ಡಿ. ಐ. ಟಿ. ಹಳಿಯಾಳದ ಕಂಪ್ಯೂಟರ್ ಸೈನ್ಸ್ ವಿಭಾಗವು ವಿದ್ಯಾರ್ಥಿಗಳಿಗೆ ಸಾಫ್ಟ್ವೇರ್ ಕ್ಷೇತ್ರದಲ್ಲಿರುವ ಉದ್ಯೋಗಾವಕಾಶಗಳ ಕುರಿತು ಅರಿವು ಮೂಡಿಸುವ ವೆಬಿನಾರ್ ಕಾರ್ಯಕ್ರಮವನ್ನು ನವೆಂಬರ್ 12ರಂದು ಹಮ್ಮಿಕೊಂಡಿತ್ತು. ಕಾರ್ಯಕ್ರಮದ ಸಂಪನ್ಮೂಲ ವ್ಯಕ್ತಿಗಳಾದ ಶ್ರೀ. ಪಾಂಡುರಂಗ ಪರ್ವತಿಕರ್ ಸಾಫ್ಟ್ವೇರ್ ಕ್ಷೇತ್ರಗಳಲ್ಲಿ ಕೆಲಸ ಮಾಡಲು ಬೇಕಾಗುವ ಅರ್ಹತೆಗಳು, ಸಾಫ್ಟ್ವೇರ್ ಕಂಪನಿಗಳು ವಿದ್ಯಾರ್ಥಿಗಳಿಂದ ಬಯಸುವ ಕೌಶಲ್ಯಗಳನ್ನು ವಿವರಿಸಿದರು. ಜಾವಾ, ಪೈಥಾನ್, ಕೃತಕ ಬುದ್ಧಿಮತ್ತೆ, ಮಶೀನ ಲರ್ನಿಂಗ್ ನಂತಹ ತಂತ್ರಜ್ಞಾನಗಳಲ್ಲಿ ಪರಿಣಿತಿ ಪಡೆದ ವಿದ್ಯಾರ್ಥಿಗಳಿಗೆ ಹೇರಳ ಅವಕಾಶಗಳಿವೆ ಎಂದು ಹೇಳಿದರು. ಪಾಂಡುರಂಗ ಪರ್ವತಿಕರ್ ಅವರು 2004 ರಿಂದ 2008 ರ ವರೆಗೆ ಮಹಾವಿದ್ಯಾಲಯದ ಕಂಪ್ಯೂಟರ್ ಸೈನ್ಸ್ ವಿಭಾಗದಲ್ಲಿ ವ್ಯಾಸಂಗ ಮಾಡಿದ್ದರು. ಬೆಂಗಳೂರಿನ ಇನ್ಸೈರೇಜ್ ಕಂಪನಿಯಲ್ಲಿ ಪ್ರಧಾನ ಸಲಹೆಗಾರರಾಗಿ ಇವರು ಕಾರ್ಯ ನಿರ್ವಹಿಸುತ್ತಿದ್ದಾರೆ. ಅಧ್ಯಕ್ಷತೆ ವಹಿಸಿ ಮಾತನಾಡಿದ ಪ್ರಾಚಾರ್ಯರಾದ ಡಾ. ವಿ. ಎ. ಕುಲಕರ್ಣಿ ಅವರು ಮಹಾವಿದ್ಯಾಲಯವು ನೀಡುತ್ತಿರುವ ಸಾಫ್ಟ್ ಸ್ಕಿಲ್ ಟ್ರೈನಿಂಗ್ ಗಳಲ್ಲಿ ಸಕ್ರಿಯವಾಗಿ ತೊಡಗಿಸಿಕೊಂಡು ಹೆಸರಾಂತ ಸಾಫ್ಟ್ವೇರ್ ಕಂಪನಿಗಳಲ್ಲಿ ಉದ್ಯೋಗ ಪಡೆದುಕೊಳ್ಳುವಂತೆ ವಿದ್ಯಾರ್ಥಿಗಳಿಗೆ ಪ್ರೇರೇಪಿಸಿದರು.

ಕಂಪ್ಯೂಟರ್ ಸೈನ್ಸ್ ವಿಭಾಗದ ಮುಖ್ಯಸ್ಥರಾದ ಪ್ರೊ. ಪೂರ್ಣಿಮಾ ರಾಯ್ಕರ್ ಸ್ವಾಗತಿಸಿದರು. ಕಾರ್ಯಕ್ರಮದ ಸಂಯೋಜಕರಾದ ಪ್ರೊ. ಯಾಸ್ಮಿನ್ ಶೇಕ್ ವಂದಿಸಿದರು. ಮೈಕ್ರೋಸಾಫ್ಟ್ ಟೀಮ್ಸ್ ತಂತ್ರಾಂಶದ ಮೂಲಕ ನೆರವೇರಿದ ಈ ವೆಬಿನಾರ್ ನಲ್ಲಿ 60ಕ್ಕೂ ಅಧಿಕ ವಿದ್ಯಾರ್ಥಿಗಳು ಪಾಲ್ಗೊಂಡಿದ್ದರು.

ಪ್ರಾಂಶುಪಾಲರು

Principal
KLS Vishwanathrao Deshpande
Institute of Technology, Haliyal